**All India Radio: Bangalore**
**National Bulletin In Kannada**
**18.12.2025  1.10 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**18.12.2025  1.10 pm**

**<>><><*><><<>**

ಮುಖ್ಯಾಂಶಗಳು

**೧. ಭಾರತ-ಓಮನ್ ವ್ಯಾಪಾರ ಶೃಂಗಸಭೆಯಿಂದ ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಕ್ಕೆ ಮತ್ತಷ್ಟು ಬಲ - ಪ್ರಧಾನಿ ನರೇಂದ್ರ ಮೋದಿ**

**೨. ಮುಂದಿನ ೧೦ ವರ್ಷಗಳವರೆಗೆ ಉಡಾನ್ ಯೋಜನೆ ವಿಸ್ತರಣೆ -ನಾಗರಿಕ ವಿಮಾನಯಾನ ಸಚಿವ ರಾಮ್‌ಮೋಹನ್ ನಾಯ್ಡು**

**೩. ವೀಸಾ ವಿನಾಯಿತಿಗೆ ಭಾರತ, ಸೌದಿ ಅರೇಬಿಯಾ ಪರಸ್ಪರ ಒಪ್ಪಿಗೆ**

**೪. ಬಿಡಬ್ಲ್ಯೂಎಫ್ ಬ್ಯಾಡ್ಮಿಂಟನ್ ವರ್ಲ್ಡ್ ಟೂರ್; ಡಬಲ್ಸ್ ವಿಭಾಗದ ಸೆಮಿಫೈನಲ್‌ನಲ್ಲಿಂದು ಸಾತ್ವಿಕ-ಚಿರಾಗ್ ಮತ್ತು ಅಲ್ಫಿಯಾನ್-ಫಿಕ್ರಿ ಜೋಡಿ ಮುಖಾಮುಖಿ**

**<>><><*><><<>**

ಭಾರತ ಮತ್ತು ಓಮನ್ ವ್ಯಾಪಾರ ಶೃಂಗಸಭೆಯು ಎರಡೂ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳಿಗೆ ಹೊಸ ದಿಕ್ಕು ಮತ್ತು ಆವೇಗವನ್ನು ನೀಡುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಮೂರು ರಾಷ್ಟ್ರಗಳ ಪ್ರವಾಸದ ಕೊನೆಯ ಚರಣದಲ್ಲಿ ಓಮನ್‌ನಲ್ಲಿರುವ ಅವರು, ಮಸ್ಕಟ್‌ನಲ್ಲಿಂದು ನಡೆದ ಭಾರತ-ಓಮನ್ ವ್ಯಾಪಾರ ಶೃಂಗಸಭೆಯನ್ನುದ್ದೇಶಿಸಿ ಮಾತನಾಡಿದರು. ಋತುಮಾನಗಳು ಬದಲಾಗಬಹುದು, ಆದರೆ ಭಾರತ ಮತ್ತು ಓಮನ್ ನಡುವಿನ ಸ್ನೇಹ ಕಾಲಕ್ರಮೇಣ ಬಲಗೊಳ್ಳುತ್ತಲೇ ಇದೆ ಎಂದು ಅವರು ಹೇಳಿದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೧೭ ಸೆಕೆಂಡ್ಸ್)**

ಇದೇ ವೇಳೆ, ಪ್ರಧಾನಿ ನರೇಂದ್ರ ಮೋದಿ ಅವರು, ಇಂದು ಓಮನ್ ಸುಲ್ತಾನ ಹೈಥಮ್ ಬಿನ್ ತಾರಿಕ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಪ್ರಮುಖವಾಗಿ, ಪ್ರಧಾನಿ ಮೋದಿ ಮತ್ತು ಓಮನ್ ಸುಲ್ತಾನ ಹೈಥಮ್ ಬಿನ್ ತಾರಿಕ್ ಅವರ ಸಮ್ಮುಖದಲ್ಲಿ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹಾಗೂ ಓಮನ್ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಕೈಸ್ ಅಲ್ ಯೂಸೆಫ್, ಇಂದು ಭಾರತ-ಓಮನ್ ಕಾರ್ಯತಂತ್ರದ ಪಾಲುದಾರಿಕೆ ಒಪ್ಪಂದಕ್ಕೆ

ಸಹಿ ಹಾಕಲಿದ್ದಾರೆ. ಎರಡು ದಿನಗಳ ಭೇಟಿಯ ಸಮಯದಲ್ಲಿ, ಪ್ರಧಾನಿ ನರೇಂದ್ರ ಮೋದಿಯವರು, ಓಮನ್ ಸುಲ್ತಾನರನ್ನು ಅವರ ಅರಮನೆಯಲ್ಲಿ ಭೇಟಿಯಾಗುವುದರ ಜೊತೆಗೆ, ಎರಡೂ ದೇಶಗಳ ವ್ಯಾಪಾರ ನಾಯಕರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ನಂತರ ಅವರು ವಿದ್ಯಾರ್ಥಿಗಳು ಮತ್ತು ಭಾರತೀಯ ಸಮುದಾಯದ ಸದಸ್ಯರೊಂದಿಗೆ ಸಹ ಸಂವಹನ ನಡೆಸಲಿದ್ದಾರೆ. ಓಮನ್‌ನಲ್ಲಿರುವ ಅನೇಕ ಭಾರತೀಯ ವಿದ್ಯಾರ್ಥಿಗಳು ಪ್ರಧಾನಿಯವರ 'ಪರೀಕ್ಷಾ ಪೆ ಚರ್ಚಾ' ಅನ್ನು ಆಲಿಸಲಿದ್ದಾರೆ. ವಿಶೇಷವಾಗಿ ಭಾರತ ಮತ್ತು ಓಮನ್ ತಮ್ಮ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ ೭೦ ನೇ ವಾರ್ಷಿಕೋತ್ಸವವನ್ನು ಆಚರಿಸುತ್ತಿರುವ ವರ್ಷದಲ್ಲಿ ಇದು ದೀರ್ಘಕಾಲದ ಮತ್ತು ಐತಿಹಾಸಿಕ ಪಾಲುದಾರರೊಂದಿಗೆ ಸಂಬಂಧವನ್ನು ಮತ್ತಷ್ಟು ಗಟ್ಟಿಗೊಳಿಸುತ್ತದೆ.

**<>><><*><><<>**

ಪ್ರಾದೇಶಿಕ ಸಂಪರ್ಕ ಯೋಜನೆಯಾದ ಉಡಾನ್ ಅಡಿಯಲ್ಲಿ ಭಾರತದ ವಿಮಾನ ನಿಲ್ದಾಣ ಜಾಲವು ೨೦೧೪ರಲ್ಲಿ ಇದ್ದ ೭೪ ವಿಮಾನ ನಿಲ್ದಾಣಗಳಿಂದ ಇಂದು ೧೬೦ ವಿಮಾನ ನಿಲ್ದಾಣಗಳಿಗೆ ಗಮನಾರ್ಹವಾಗಿ ವಿಸ್ತರಿಸಿದೆ ಎಂದು ನಾಗರಿಕ ವಿಮಾನಯಾನ ಸಚಿವ ರಾಮ್‌ಮೋಹನ್ ನಾಯ್ಡು ಹೇಳಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೋತ್ತರ ಅವಧಿಯಲ್ಲಿ ಪೂರಕ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಉಡಾನ್ ಯೋಜನೆಯಡಿಯಲ್ಲಿ ಅಸ್ತಿತ್ವದಲ್ಲಿರುವ ವಾಯುನೆಲೆಗಳನ್ನು ಕಾರ್ಯಾಚರಣಾ ವಾಯುಯಾನ ಕೇಂದ್ರಗಳಾಗಿ ಯಶಸ್ವಿಯಾಗಿ ಪರಿವರ್ತಿಸಿದೆ ಎಂದು ತಿಳಿಸಿದರು. ಈ ಯೋಜನೆಯ ಮೂಲಕ ದೇಶಾದ್ಯಂತ ವಿಶೇಷವಾಗಿ ಈಶಾನ್ಯ ಮತ್ತು ಉತ್ತರಾಖಂಡ್ ರಾಜ್ಯಗಳಲ್ಲಿ ಹೆಲಿಕಾಪ್ಟರ್ ಕಾರ್ಯಾಚರಣೆಗಳನ್ನು ಸರ್ಕಾರ ಬೆಂಬಲಿಸುತ್ತಿದೆ. ಉಡಾನ್ ಯೋಜನೆಯನ್ನು ಇನ್ನೂ ೧೦ ವರ್ಷಗಳವರೆಗೆ ವಿಸ್ತರಿಸಲಾಗುವುದು ಎಂದು ಸಚಿವ ರಾಮ್‌ಮೋಹನ್ ನಾಯ್ಡು ಮಾಹಿತಿ ನೀಡಿದರು.

**<>><><*><><<>**

ಬುಡಕಟ್ಟು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಲು ದೇಶಾದ್ಯಂತ ೪೪೦ ಏಕಲವ್ಯ ಮಾದರಿ ವಸತಿ ಶಾಲೆಗಳು ಕಾರ್ಯ ನಿರ್ವಹಿಸುತ್ತಿವೆ ಎಂದು ಕೇಂದ್ರ ಬುಡಕಟ್ಟು ವ್ಯವಹಾರಗಳ ಸಚಿವ ಜುಹೆಲ್ ಒರಾಮ್ ಹೇಳಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೋತ್ತರ ಅವಧಿಯಲ್ಲಿ ಪೂರಕ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು ಕೇಂದ್ರ ಸರ್ಕಾರ ೭೨೮ ಏಕಲವ್ಯ ಮಾದರಿ ವಸತಿ ಶಾಲೆಗಳನ್ನು ಮಂಜೂರು ಮಾಡಿದೆ ಎಂದು ತಿಳಿಸಿದರು. ಕೇಂದ್ರ ಸರ್ಕಾರ ಬುಡಕಟ್ಟು ಜನಾಂಗದವರಿಗಾಗಿ ಅನೇಕ ಕಲ್ಯಾಣ ಕಾರ್ಯಕ್ರಮಗಳನ್ನು ಪ್ರಾರಂಭಿಸಿದೆ. ೬೩ ಸಾವಿರ ಬುಡಕಟ್ಟು ಗ್ರಾಮಗಳನ್ನು ಅಭಿವೃದ್ಧಿಪಡಿಸಲು ಒಟ್ಟು ೮೦ ಸಾವಿರ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಧರ್ತಿ ಆಬಾ ಜನ್‌ಜಾತಿಯ ಗ್ರಾಮ ಉತ್ಕೃಷ್ಟ ಅಭಿಯಾನವನ್ನು ಪ್ರಾರಂಭಿಸಿದೆ.

ವಿಶೇಷವಾಗಿ ದುರ್ಬಲ ಬುಡಕಟ್ಟು ಸಮುದಾಯಗಳ ಉನ್ನತಿಗಾಗಿ ಪ್ರಧಾನಮಂತ್ರಿ ಜನ್‌ಮನ್ ಯೋಜನೆಯನ್ನು ಸಹ ಪ್ರಾರಂಭಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

<>><><*><><<>

೨೦೨೯ರ ವೇಳೆಗೆ ಭಾರತ ತನ್ನ ರಕ್ಷಣಾ ಉತ್ಪಾದನೆಯನ್ನು ದ್ವಿಗುಣಗೊಳಿಸಿ ಮೂರು ಲಕ್ಷ ಕೋಟಿ ರೂಪಾಯಿಗಳಿಗೆ ಹೆಚ್ಚಿಸುವ ಗುರಿ ಹೊಂದಿದೆ ಎಂದು ಕೇಂದ್ರ ಸಚಿವ ಡಾ. ಮನ್ಸುಖ್ ಮಾಂಡವೀಯ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಚಿವರು, ಭಾರತ ಈಗಾಗಲೇ ರಕ್ಷಣಾ ಉತ್ಪಾದನೆಯಲ್ಲಿ ಗಮನರ್ಹಾ ಬದಲಾವಣೆ ದಾಖಲಿಸಿದೆ. ಪ್ರಸ್ತುತ ಇದು ಒಂದು ಲಕ್ಷ ೫೦ ಸಾವಿರ ಕೋಟಿ ರೂಪಾಯಿ ಮೌಲ್ಯದ್ದಾಗಿದೆ ಎಂದು ಹೇಳಿದರು. ಮುಂದಿನ ೪ ವರ್ಷಗಳಲ್ಲಿ ರಕ್ಷಣಾ ರಫ್ತು ೨೫ ಸಾವಿರ ಕೋಟಿ ರೂಪಾಯಿಗಳಿಂದ ೫೦ ಸಾವಿರ ಕೋಟಿ ರೂಪಾಯಿಗಳಿಗೆ ದ್ವಿಗುಣಗೊಳ್ಳಲಿದೆ. ಇದು ಜಾಗತಿಕ ರಕ್ಷಣಾ ನಾಯಕತ್ವದಲ್ಲಿ ಭಾರತದ ಪಾತ್ರವನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಸಚಿವರು ವಿಶ್ವಾಸ ವ್ಯಕ್ತಪಡಿಸಿದರು.

<>><><*><><<>

ಭಾರತ-ಸೌದಿ ಅರಬೇಬಿಯಾ ಕಾರ್ಯತಂತ್ರದ ಪಾಲುದಾರಿಕೆ ಮಂಡಳಿಯ ಅಡಿಯಲ್ಲಿ ಅಧಿಕೃತ ಪ್ರಯಾಣವನ್ನು ಸುಗಮಗೊಳಿಸಲು ಮತ್ತು ದ್ವಿಪಕ್ಷೀಯ ವಿನಿಯಮಯವನ್ನು ಹೆಚ್ಚಿಸಲು ರಿಯಾದ್‌ನಲ್ಲಿ ಇಂದು ದ್ವಿಪಕ್ಷೀಯ ವೀಸಾ ವಿನಾಯಿತಿ ಒಪ್ಪಂದಕ್ಕೆ ಭಾರತ ಮತ್ತು ಸೌದಿ ಅರೇಬಿಯಾ ಸಹಿ ಹಾಕಿವೆ. ಸೌದಿ ಅರೇಬಿಯಾದ ಭಾರತೀಯ ರಾಯಭಾರಿ ಸುಹೇಲ್ ಅಜಾಜ್ ಖಾನ್ ಮತ್ತು ಸೌದಿ ಅರೇಬಿಯಾ ವಿದೇಶಾಂಗ ವ್ಯವಹಾರಗಳ ಉಪ ಸಚಿವ ಅಬ್ದುಲ್ ಮಜೀದ್ ಬಿನ್ ರಷೀದ್ ಅಲ್‌ಸ್ಮರಿ ಅವರು ಈ ಒಪ್ಪಂದಕ್ಕೆ ಸಹಿ ಹಾಕಿದರು. ಈ ಒಪ್ಪಂದವು ಎರಡು ದೇಶಗಳ ರಾಜತಾಂತ್ರಿಕ, ವಿಶೇಷ ಮತ್ತು ಅಧಿಕೃತ ಪಾಸ್‌ಪೋರ್ಟ್‌ಗಳನ್ನು ಹೊಂದಿರುವವರಿಗೆ ಅಲ್ಪಾವಧಿಯ ವೀಸಾ ಅವಶ್ಯಕತೆಗಳಿಂದ ಪರಸ್ಪರ ವಿನಾಯಿತಿ ನೀಡುತ್ತದೆ.  ಈ ಒಪ್ಪಂದವು ಎರಡೂ ರಾಷ್ಟ್ರಗಳ ನಡುವಿನ ಕಾರ್ಯತಂತ್ರದ ಪಾಲುದಾರಿಕೆಯನ್ನು ಗಟ್ಟಿಗೊಳಿಸುವ ಗುರಿಯನ್ನು ಹೊಂದಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

<>><><*><><<>

ಕೃತಕಬುದ್ಧಿಮತ್ತೆ ಮತ್ತು ಅರೆವಾಹಕಗಳಿಗೆ ಜಾಗತಿಕ ಪೂರೈಕೆ ಸರಪಳಿಗಳನ್ನು ಭದ್ರಪಡಿಸಿಕೊಳ್ಳುವ ಪ್ರಯತ್ನಗಳಲ್ಲಿ ಭಾರತವನ್ನು ನಿರ್ಣಾಯಕ ಸಾಂಭವ್ಯ ಪಾಲುದಾರ ಎಂಬುದನ್ನು ಅಮೆರಿಕ ಪರಿಗಣಿಸುತ್ತದೆ ಎಂದು ಅಮೆರಿಕದ ಆರ್ಥಿಕ ವ್ಯವಹಾರಗಳ ಕಾರ್ಯದರ್ಶಿ ಜಾಕೋಬ್ ಹೆಲ್ಬರ್ಗ್ ಹೇಳಿದ್ದಾರೆ. ವಾಷಿಂಗ್‌ಟನ್‌ನಲ್ಲಿ ನಡೆದ ಪ್ಯಾಕ್ಸ್ ಸಿಲಿಕಾ ಶೃಂಗಸಭೆಯಲ್ಲಿ ವರ್ಚುವಲ್ ಮೂಲಕ ಭಾಗವಹಿಸಿ ಮಾತನಾಡಿದ ಅವರು, ಆರ್ಥಿಕ ಭದ್ರತಾ ವಿಷಯಗಳಲ್ಲಿ ಭಾರತದೊಂದಿಗೆ ಸಹಯೋಗವನ್ನು ಹೆಚ್ಚಿಸಲು ಅಮೆರಿಕ ಪ್ರಯತ್ನಿಸುತ್ತಿರುವುದರಿಂದ

ಫೆಬ್ರವರಿಯಲ್ಲಿ ನಡೆಯಲಿರುವ ಭಾರತ ಎಐ-ಇಂಪ್ಯಾಕ್ಟ್ ಶೃಂಗಸಭೆಯಲ್ಲಿ ಭಾಗವಹಿಸುವುದಾಗಿ ಘೋಷಿಸಿದರು. ವ್ಯಾಪಾರ ವ್ಯವಸ್ಥೆಗಳಿಗೆ ಸಂಬಂಧಿಸಿದಂತೆ ಅಮೆರಿಕ ಮತ್ತು ಭಾರತ ನಡುವಿನ ಮಾತುಕತೆ ಪೂರೈಕೆ ಸರಪಳಿ ಕುರಿತಾದ ಚರ್ಚೆಗಳಿಗೆ ಸಂಪೂರ್ಣವಾಗಿ ಪ್ರತ್ಯೇಕವಾಗಿ ಸಮಾನಾಂತರ ಮಾರ್ಗವಾಗಿದೆ. ಇದರಿಂದ ದ್ವಿಪಕ್ಷೀಯ ಆರ್ಥಿಕ ಭದ್ರತಾ ವ್ಯವಸ್ಥೆಯಲ್ಲಿ ಗಣನೀಯ ಬೆಳವಣಿಗೆಗೆ ಕಾರಣವಾಗುತ್ತದೆ ಎಂದು ಜಾಕೋಬ್ ಹೆಲ್ಬರ್ಗ್ ಅಭಿಪ್ರಾಯಪಟ್ಟಿದ್ದಾರೆ.

**<>><><*><><<>**

ದೆಹಲಿಯಲ್ಲಿ ಹದಗೆಡುತ್ತಿರುವ ವಾಯುಮಾಲಿನ್ಯವನ್ನು ತಡೆಯಲು ಕೈಗೊಂಡಿರುವ ಅಭಿಯಾನದ ಭಾಗವಾಗಿ ದೆಹಲಿ ಸರ್ಕಾರ ಇಂದಿನಿಂದ 'ಮಾನ್ಯವಾದ ಮಾಲಿನ್ಯ ನಿಯಂತ್ರಣ ಪ್ರಮಾಣಪತ್ರ ಇಲ್ಲದವರಿಗೆ ಇಂಧನ ಇಲ್ಲ' ಎಂಬ ನಿಯಮವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಮುಂದಾಗಿದೆ. ಈ ಅಭಿಯಾನದಡಿಯಲ್ಲಿ ದೆಹಲಿಯಾದ್ಯಂತ ಇರುವ ಪೆಟ್ರೋಲ್ ಬಂಕ್‌ಗಳಲ್ಲಿ ಮಾನ್ಯವಾದ ಮಾಲಿನ್ಯ ನಿಯಂತ್ರಣ ಪ್ರಮಾಣಪತ್ರ ಇಲ್ಲದ ವಾಹನಗಳಿಗೆ ಪೆಟ್ರೋಲ್ ವಿತರಣೆಗೆ ನಿರಾಕರಿಸಲಾಗುತ್ತದೆ. ಇದೇ ವೇಳೆ ದೆಹಲಿಯವರೆಗೆ ನೋಂದಾಯಿಸಲಾದ ಬಿಎಸ್-೬ ಅಲ್ಲದ ವಾಹನಗಳು ನಗರ ಪ್ರವೇಶಿಸುವುದನ್ನು ನಿಷೇಧಿಸಲಾಗಿದೆ.

**<>><><*><><<>**

ಛತ್ತೀಸ್‌ಗಢದ ಸುಕ್ಮಾ ಜಿಲ್ಲೆಯಲ್ಲಿ ಇಂದು ಭದ್ರತಾ ಪಡೆಗಳೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ಮೂವರು ಮಾವೋವಾದಿಗಳು ಸಾವನ್ನಪ್ಪಿದ್ದಾರೆ. ಕಿಸ್ತಾರಾಮ್‌ನ ಸಿಂಗನಮರಗು ಪ್ರದೇಶದಲ್ಲಿ ಮಾವೋವಾದಿಗಳ ಉಪಸ್ಥಿತಿಯ ಬಗ್ಗೆ ಗುಪ್ತಚರ ಮಾಹಿತಿಯ ಮೇರೆಗೆ ಜಿಲ್ಲಾ ಮೀಸಲು ಪೊಲೀಸ್ ಪಡೆ ಕಾರ್ಯಾಚರಣೆ ಆರಂಭಿಸಿತು. ಈ ವೇಳೆ ಭದ್ರತಾ ಪಡೆಗಳು ಮತ್ತು ಮಾವೋವಾದಿಗಳ ನಡುವೆ ಗುಂಡಿನ ಚಕಮಕಿ ನಡೆಯಿತು. ಸ್ಥಳದಿಂದ ಮೂವರು ಮಾವೋವಾದಿಗಳ ಮೃತದೇಹಗಳನ್ನು ವಶಪಡಿಸಿಕೊಳ್ಳಲಾಗಿದೆ. ಸ್ಥಳದಲ್ಲಿ ಶೋಧ ಕಾರ್ಯಾಚರಣೆ ಮುಂದುವರೆದಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

**<>><><*><><<>**

ಚೀನಾದ ಹ್ಯಾಂಗ್‌ಝೌನಲ್ಲಿ ನಡೆಯಲಿರುವ ಬಿಡಬ್ಲ್ಯೂಎಫ್ ಬ್ಯಾಡ್ಮಿಂಟನ್ ವರ್ಲ್ಡ್ ಟೂರ್ ಪಂದ್ಯಾವಳಿಯ ಸೆಮಿಫೈನಲ್‌ನಲ್ಲಿ, ಭಾರತದ ಪುರುಷರ ಡಬಲ್ಸ್ ಜೋಡಿ- ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಇಂದು ಇಂಡೋನೇಷ್ಯಾದ ಫಜರ್ ಅಲ್ಫಿಯಾನ್ ಮತ್ತು ಮುಹಮ್ಮದ್ ಶೋಹಿಬುಲ್ ಫಿಕ್ರಿ ಅವರನ್ನು ಎದುರಿಸಲಿದ್ದಾರೆ. ಭಾರತೀಯ ಜೋಡಿಯು ತಮ್ಮ ಮೊದಲ ಬಿ ಗುಂಪಿನ ಪಂದ್ಯದಲ್ಲಿ ಚೀನಾದ ಚಾಂಗ್ ವಾಂಗ್ ಮತ್ತು ವೀ ಕೆಂಗ್ ಲಿಯಾಂಗ್ ವಿರುದ್ಧ ೧೨-೨೧, ೨೨-೨೦, ೨೧-೧೪ ಅಂತರದಲ್ಲಿ ರೋಮಾಂಚಕ ಜಯಗಳಿಸುವ ಮೂಲಕ ತಮ್ಮ ಅಭಿಯಾನವನ್ನು ಆರಂಭಿಸಿತು.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧.೩೦ ಕ್ಕೆ ><><<>